# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)
## ವಾರ್ಡ್ ಸಮಿತಿ ಸಭೆ, ದಿನಾಂಕ:06-09-2021 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/21/21-22

ದಿನಾಂಕ: 06-09-2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri. Madhu | Junior Health Inspector |
| 4. | Sri Nagaraj | Tax Inspector |
| 5. | Sri Venkatesh | Horticulture Inspector |
| 6. | Sri Kodandarama | J E Bescom |
| 7. | Sri Shivalinga murthy | J E Bescom |
| 8. | Sri Suresh | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 09-08-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ದೊಡ್ಡಣ್ಣನಗರದ ಮುರುಗನ್ ದೇವಸ್ಥಾನದಲ್ಲಿ ಈಗಾಗಲೇ ಬೋರ್‌ವೆಲ್ ಇದ್ದು, ಸದರಿ ಬೋರ್‌ವೆಲ್‌ಗೆ ಪೈಪ್‌ಲೈನ್ ಅಳವಡಿಸುವ ಬಗ್ಗೆ ಚರ್ಚಿಸಲಾಯಿತು.
2. ಮೋದಿ ರಸ್ತೆಯಲ್ಲಿರುವ ಉರ್ದು ಶಾಲೆಯ ಹತ್ತಿರ ಮತ್ತು ಮೋದಿ ರಸ್ತೆಯ 11ನೇ ಅಡ್ಡರಸ್ತೆಯಲ್ಲಿರುವ ಇರುವ ವಿದ್ಯುತ್ ಟ್ರಾನ್ಸ್‌ಪರ್ಮ್ ಅನ್ನು ಸಿಂಗಲ್ ಪೋಲ್ ಟ್ರಾನ್ಸ್‌ಪರ್ಮ್ ಅನ್ನು ಬದಲಾಯಿಸಲು ಸಂಬಂಧಪಟ್ಟ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.
3. ಮೋದಿ ಗಾರ್ಡನ್‌ನಿಂದ ಕಾವಲ್‌ಭೈರಸಂದ್ರ ಕಡೆಗೆ ಹೋಗುವ ಹೊಸ ರಸ್ತೆಯಲ್ಲಿ ಇಕ್ಕೆಲಗಳಲ್ಲಿ ಗಿಡಗಳನ್ನು ನೆಡುವಂತೆ ಸಾರ್ವಜನಿಕರ ಆಗ್ರಹದಂತೆ ಕ್ರಮಕೈಗೊಳ್ಳಲು ಅರಣ್ಯ ಇಲಾಖೆ ರವರಿಗೆ ಸೂಚಿಸಲು ನಿರ್ಧರಿಸಲಾಯಿತು.
4. ದೊಡ್ಡಣ್ಣನಗರದಲ್ಲಿ ಸಿ.ಸಿ.ಕ್ಯಾಮರಗಳನ್ನು ಅಳವಡಿಸಿದ್ದು, ಸದರಿ ಕ್ಯಾಮರಗಳಿಗೆ ವಿದ್ಯುತ್ ಮೀಟರ್‌ಗಳನ್ನು ಅಳವಡಿಸುವ ಬಗ್ಗೆ ವಾರ್ಡ್ ಕಮಿಟಿ ಸದಸ್ಯರು ಕೋರಿರುತ್ತಾರೆ. ಅದರಂತೆ ಬೆಸ್ಕಾಂ ಅಧಿಕಾರಿಗಳ ಜೊತೆ ಸಮಾಲೋಚನೆ ನೆಡಿಸಿ ಕ್ರಮಕೈಗೊಳ್ಳುವಂತೆ ಸಹಾಯಕ ಅಭಿಯಂತರರಾದ ಶ್ರೀ.ಯುವಕುಮಾರ್ ರವರಿಗೆ ಸೂಚಿಸಲಾಗಿರುತ್ತದೆ.
5. ದೊಡ್ಡಣ್ಣ ನಗರದ ಅಬೇಂಡ್ಕರ್ ಪಾರ್ಕ್ ಒಳಗಡೆ ಇರುವ ವಿದ್ಯುತ್ ಟ್ರಾನ್ಸ್‌ಪರ್ಮ್‌ಗೆ Chain link Fencing ಅಳವಡಿಸುವ ಬಗ್ಗೆ ಚರ್ಚಿಸಲಾಗಿರುತ್ತದೆ.

ಸಹಿ

(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09 ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.